# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನ)
## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 04ನೇ ಮಾರ್ಚ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ** ಅವರುಗಳು ದಿನಾಂಕ:10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020ನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀ ಪುಟ್ಟಣ್ಣ** ಅವರು 2006ರ ನಂತರ ನೇಮಕಗೊಂಡಿರುವ ರಾಜ್ಯದ ಎಲ್ಲಾ ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ಯೋಜನೆಯನ್ನು ಕಡ್ಡಾಯವಾಗಿ ಜಾರಿಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3. **ಶ್ರೀಯುತರುಗಳಾದ ಕೆ.ಸಿ.ಕೊಂಡಯ್ಯ, ಕೆ.ಪಿ. ನಂಜುಂಡಿ ವಿಶ್ವಕರ್ಮ, ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು, ಅಡಗೂರು ಹೆಚ್ ವಿಶ್ವನಾಥ್, ಮರಿತಿಬ್ಬೇಗೌಡ, ಆರ್. ಧರ್ಮಸೇನ** ಹಾಗೂ ಇತರರು ಹಿಂದುಳಿದ ವರ್ಗಗಳ ಆಯೋಗವು 2014-15ನೇ ಸಾಲಿನಲ್ಲಿ ಕೈಗೊಂಡಿರುವ ಜಾತಿ ಜನಗಣತಿ ಸಮೀಕ್ಷಾ ವರದಿಯನ್ನು ಸಲ್ಲಿಸದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

...2

## 05. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ** ಅವರುಗಳು 1995 ರಿಂದ 2005ನೇ ಸಾಲಿನವರೆಗೆ ಪ್ರಾರಂಭವಾಗಿರುವ ಕನ್ನಡ ಮಾಧ್ಯಮ ಶಾಲಾ/ಕಾಲೇಜುಗಳ ಬೋಧಕ ಬೋಧಕೇತರರಿಗೆ ವೇತನಾನುದಾನ ನೀಡಬೇಕೆಂದು ಹಾಗೂ ಸರ್ಕಾರಿ ಶಾಲೆಗಳಲ್ಲಿ ನೀಡುತ್ತಿರುವ ಸೌಲಭ್ಯಗಳನ್ನು ಕನ್ನಡ ಮಾಧ್ಯಮ ಶಾಲೆಗಳಿಗೂ ವಿಸ್ತರಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಎಸ್.ರವಿಕುಮಾರ್** ಅವರು ಬೆಂಗಳೂರು ನಗರ ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂ.63ರಲ್ಲಿ ಐದು ಎಕರೆ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ತಾಂತ್ರಿಕ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರು ಬಳ್ಳಾರಿ ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ಮರುಪಾವತಿಸುವಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸುವುದು.

## 06. "ಒಂದು ರಾಷ್ಟ್ರ – ಒಂದು ಚುನಾವಣೆ" ಕುರಿತು ವಿಶೇಷ ಚರ್ಚೆ

**ಎಸ್. ನಿರ್ಮಲ**
**ಜಂಟಿ ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**